Akashvani : Bangalore
National Bulletin In Kannada
20.07.2024 / 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
20.07.2024 / 7.35AM
*******

ಮುಖ್ಯಾಂಶಗಳು:

1. ಬರುವ ಸೋಮವಾರದಿಂದ ಸಂಸತ್ತಿನ ಮುಂಗಾರು ಅಧಿವೇಶನ; ಹಲವು ಮಹತ್ವದ ಮಸೂದೆಗಳ ಮಂಡನೆ
2. ಮೈಕ್ರೋಸಾಫ್ಟ್ ಕಾರ್ಯಾಚರಣೆ ಸ್ಥಗಿತದಿಂದ ದೇಶದ ಹಣಕಾಸು ವ್ಯವಸ್ಥೆ ಮೇಲೆ ಹೆಚ್ಚಿನ ಪರಿಣಾಮ ಬೀರಿಲ್ಲ - ಆರ್‌ಬಿಐ ಸ್ಪಷ್ಟನೆ
3. ಸೇನಾಪಡೆಗಳಲ್ಲಿ ಅನನ್ಯ ಸೇವೆ ಸಲ್ಲಿಸಿದ ಯೋಧರಿಗೆ ರಾಷ್ಟ್ರಪತಿ ಅವರಿಂದ ವಿಶಿಷ್ಟ ಸೇವಾ ಪದಕಗಳ ಪ್ರದಾನ
4. ಸರ್ಕಾರಿ ತಾಂತ್ರಿಕ ಶಿಕ್ಷಣ ವಲಯ ಸುಧಾರಣೆಗೆ ಕೇಂದ್ರ ಸರ್ಕಾರದಿಂದ ಹಲವು ಕ್ರಮ - ಸಚಿವ ಅಶ್ವಿನಿ ವೈಷ್ಣವ್
5. ಮಹಿಳಾ ಏಷ್ಯಾ ಕಪ್ ಟಿ-೨೦ ಕ್ರಿಕೆಟ್; ಪಾಕಿಸ್ತಾನದ ವಿರುದ್ಧ ಭಾರತದ ವನಿತೆಯರಿಗೆ ೭ ವಿಕೆಟ್ ಜಯ

*********

ಸಂಸತ್ತಿನ ಮುಂಗಾರು ಅಧಿವೇಶನ ಇದೇ ೨೨ರ ಸೋಮವಾರದಿಂದ ಆರಂಭವಾಗಲಿದೆ. ಈ ಅಧಿವೇಶನದಲ್ಲಿ ವಿಪತ್ತು ನಿರ್ವಹಣಾ ಕಾನೂನಿಗೆ ತಿದ್ದುಪಡಿ ತರುವುದು ಸೇರಿದಂತೆ ಒಟ್ಟು ಆರು ಹೊಸ ಮಸೂದೆಗಳನ್ನು ಮಂಡಿಸಲು ಸರ್ಕಾರ ನಿರ್ಧರಿಸಿದೆ. ಹಣಕಾಸು ಮಸೂದೆಯ ಹೊರತಾಗಿ, ನಾಗರಿಕ ವಿಮಾನಯಾನ ಕ್ಷೇತ್ರದಲ್ಲಿ ಸುಲಭವಾಗಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡುವ ನಿಬಂಧನೆಗಳನ್ನು ಒದಗಿಸಲು ೧೯೩೪ರ ಏರ್‌ಕ್ರಾಫ್ಟ್ ಕಾಯ್ದೆಯನ್ನು ಬದಲಿಸಲಿರುವ ಸರ್ಕಾರ, ಭಾರತೀಯ ವಾಯುಯಾನ್ ವಿಧೇಯಕ-೨೦೨೪ನ್ನು ಜಾರಿಗೆ ತರಲಿದೆ. ಸಂಸತ್ತಿನ ಮುಂಗಾರು ಅಧಿವೇಶನ ಇದೇ ೨೨ರಿಂದ ಪ್ರಾರಂಭವಾಗಿ ಆಗಸ್ಟ್ ೧೨ ರವರೆಗೆ ಮುಂದುವರೆಯಲಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇದೇ ೨೩ ರಂದು ಕೇಂದ್ರ ಬಜೆಟ್ ಮಂಡಿಸಲಿದ್ದಾರೆ ಎಂದು ಹೇಳಿದ್ದಾರೆ. ನಡುವೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸಂಸತ್ತಿನ ಕಾರ್ಯಸೂಚಿಯನ್ನು ನಿರ್ಧರಿಸುವ ವ್ಯವಹಾರ ಸಲಹಾ ಸಮಿತಿ ರಚಿಸಿದ್ದು, ಸ್ವತಃ ಅವರೇ ಈ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಉಳಿದಂತೆ, ಟಿಎಂಸಿಯ ಸುದೀಪ್ ಬಂಡೋಪಾಧ್ಯಾಯ, ಬಿಜೆಪಿಯ ಪಿ.ಪಿ. ಚೌಧರಿ, ನಿಶಿಕಾಂತ್ ದುಬೇ,

ಸಂಜಯ್ ಜೈಸ್ವಾಲ್, ಬೈಜಯಂತ್ ಪಾಂಡಾ, ಅನುರಾಗ್ ಠಾಕೂರ್, ಭಾರ್ತೃಹರಿ ಮಹತಾಬ್, ಟಿಡಿಪಿಯ ಲವು ಶ್ರೀಕೃಷ್ಣ ದೇವರಾಯಲು, ಕಾಂಗ್ರೆಸ್‌ನ ಗೌರವ್ ಗೊಗೊಯಿ, ಕೊಡಿಕುನಿಲ್ ಸುರೇಶ್, ಜೆಡಿಯುನ ದಿಲೇಶ್ವರ್ ಕಮೈತ್, ಡಿಎಂಕೆಯ ದಯಾನಿಧಿ ಮಾರನ್, ಶಿವಸೇನೆಯ ಅರವಿಂದ್ ಸಾವಂತ್ ಹಾಗೂ ಸಮಾಜವಾದಿ ಪಕ್ಷದ ಲಾಲ್ಜಿತ್ ವರ್ಮಾ ಸದಸ್ಯರಾಗಿದ್ದಾರೆ.

*********

ಮೈಕ್ರೋಸಾಫ್ಟ್ ಕಾರ್ಯಾಚರಣೆ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಭಾರತದ ಹಣಕಾಸು ಹಾಗೂ ಪಾವತಿ ವ್ಯವಸ್ಥೆ ಮೇಲೆ ಹೆಚ್ಚಿನ ಪರಿಣಾಮ ಉಂಟಾಗಿಲ್ಲ ಎಂದು ಭಾರತೀಯ ರಿಸರ್ವ್ ಬ್ಯಾಂಕ್ - ಆರ್‌ಬಿಐ ಸ್ಪಷ್ಟಪಡಿಸಿದೆ. ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲನೆ ನಡೆಸಿದ ನಂತರ ಕೇವಲ ಹತ್ತು ಬ್ಯಾಂಕುಗಳು ಮತ್ತು ಎನ್‌ಬಿಎಫ್‌ಸಿಗಳ ಮೇಲೆ ಸಣ್ಣ ಪ್ರಮಾಣದ ತೊಂದರೆ ಉಂಟಾಗಿದೆ ಎಂದು ಆರ್‌ಬಿಐ ಹೇಳಿಕೆಯಲ್ಲಿ ತಿಳಿಸಿದೆ. ಒಟ್ಟಾರೆ ಜಾಗತಿಕ ಮಟ್ಟದಲ್ಲಿ ರಿಸರ್ವ್ ಬ್ಯಾಂಕ್‌ನ ವ್ಯಾಪ್ತಿಗೆ ಬರುವ ಭಾರತೀಯ ಹಣಕಾಸು ವಲಯ ಯಥಾವತ್ತಾಗಿ ತನ್ನ ಕಾರ್ಯಾಚರಣೆಯನ್ನು ಮುಂದುವರಿಸಿದೆ ಎಂದು ಆರ್‌ಬಿಐ ಹೇಳಿದೆ. ಈ ಮಧ್ಯೆ, ಜಾಗತಿಕವಾಗಿ ನಿನ್ನೆ ಮೈಕ್ರೋಸಾಫ್ಟ್ ಕಾರ್ಯನಿರ್ವಹಣೆ ಸ್ಥಗಿತಗೊಂಡ ಪರಿಣಾಮ, ವಿಮಾನಯಾನ, ಷೇರು ಮಾರುಕಟ್ಟೆ, ಬ್ಯಾಂಕಿಂಗ್ ಕಾರ್ಯಾಚರಣೆಗಳು ಸೇರಿದಂತೆ ವಿವಿಧ ವಲಯಗಳಲ್ಲಿ ವ್ಯಾಪಕ ತಾಂತ್ರಿಕ ತೊಂದರೆ ಉಂಟಾಯಿತು. ಮೈಕ್ರೋಸಾಫ್ಟ್ ಸ್ಥಗಿತದಿಂದಾಗಿ ವಿಮಾನಯಾನಕ್ಕೆ ದೊಡ್ಡ ತೊಂದರೆಯಾಗಿದ್ದು, ಭಾರತದ ಆಕಾಶ, ಇಂಡಿಗೋ, ಏರ್ ಇಂಡಿಯಾ, ವಿಸ್ತಾರಾ ಮತ್ತು ಸ್ಪೈಸ್‌ಜೆಟ್‌ನಂತಹ ಪ್ರಮುಖ ವಿಮಾನಯಾನ ಸಂಸ್ಥೆಗಳು ಸಮಸ್ಯೆಗೆ ಸಿಲುಕಿವೆ. ದೆಹಲಿ ವಿಮಾನ ನಿಲ್ದಾಣದಲ್ಲೂ ಈ ಸಮಸ್ಯೆ ಎದುರಾಗಿದ್ದು, ಕೆಲವು ಸೇವೆಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿವೆ. ಜಾಗತಿಕವಾಗಿ ಲಕ್ಷಾಂತರ ವಿಂಡೋಸ್ ಬಳಕೆದಾರರು ಬ್ಲೂ ಸ್ಕ್ರೀನ್ ಸಮಸ್ಯೆ ಎದುರಿಸುತ್ತಿದ್ದಾರೆ. ಕಂಪ್ಯೂಟರ್‌ಗಳು ಏಕಾಏಕಿ ಕಾರ್ಯ ನಿರ್ವಹಿಸುವುದನ್ನು ನಿಲ್ಲಿಸಿದ್ದು, ಬಳಕೆದಾರರ ಡೇಟಾಗಳ ಮೇಲೆ ಪರಿಣಾಮ ಬೀರುವ ಆತಂಕ ಎದುರಾಗಿದೆ. ಈ ಕುರಿತು ಸ್ಪಷ್ಟನೆ ನೀಡಿರುವ ಮೈಕ್ರೋಸಾಫ್ಟ್ ಸಂಸ್ಥೆ, ಸಾಫ್ಟ್‌ವೇರ್ ಅಪ್‌ಡೇಟ್ ಮಾಡಿದ್ದರಿಂದ ಮೈಕ್ರೊಸಾಫ್ಟ್ ಕ್ಲೌಡ್‌ನಲ್ಲಿ ಈ ಸಮಸ್ಯೆ ಉಂಟಾಗಿದೆ. ಶೀಘ್ರವೇ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದೆ.

*********

ಸೇನಾಪಡೆಗಳಲ್ಲಿ ಹಾಗೂ ಭಾರತೀಯ ಕರಾವಳಿ ಗಸ್ತು ಪಡೆಗಳಲ್ಲಿ ಅನನ್ಯ ಸೇವೆ ಸಲ್ಲಿಸುತ್ತಿರುವ ಮತ್ತು ಸೇವೆಯಿಂದ ನಿವೃತ್ತರಾಗಿರುವ ೯೪ ಯೋಧರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ವಿಶಿಷ್ಟ ಸೇವಾ ಪದಕಗಳನ್ನು ಪ್ರದಾನ ಮಾಡಿದ್ದಾರೆ. ನವದೆಹಲಿಯ ರಾಷ್ಟ್ರಪತಿಭವನದಲ್ಲಿ ನಿನ್ನೆ ನಡೆದ ರಕ್ಷಣಾ ಹೂಡಿಕೆ ಸಮಾವೇಶ ೨೦೨೪ ಹಂತ ೨ರ ಸಮಾರಂಭದಲ್ಲಿ ರಾಷ್ಟ್ರಪತಿ ಅವರು, ೩೧ ಮಂದಿಗೆ ಪರಮ ವಿಶಿಷ್ಟ ಸೇವಾ ಪದಕಗಳು, ನಾಲ್ಕು ಉತ್ತಮ ಯೋಧ ಸೇವಾ ಪದಕ, ಎರಡು ಬಾರಿ ಅತಿ ವಿಶಿಷ್ಟ ಸೇವಾ ಪದಕಗಳು ಮತ್ತು ೫೭ ಅತಿ ವಿಶಿಷ್ಟ ಸೇವಾ ಪದಕಗಳನ್ನು ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನಕರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ವ್ಯವಹಾರಗಳ

ಸಚಿವ ಡಾ. ಎಸ್. ಜೈಶಂಕರ್, ದೆಹಲಿಯ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

*********

ಭಾರತವು ೨೦೩೦ರ ವೇಳೆಗೆ ಎಲೆಕ್ಟ್ರಾನಿಕ್ಸ್ ಉತ್ಪಾದನೆಯ ಮೌಲ್ಯವನ್ನು ೫೦೦ ಶತಕೋಟಿ ಅಮೆರಿಕನ್ ಡಾಲರ್ ಸಾಧಿಸುವ ಗುರಿಯನ್ನು ಹೊಂದಿದೆ. ಈ ಮಹತ್ವಾಕಾಂಕ್ಷೆಯ ಗುರಿಯು ಸಿದ್ಧಪಡಿಸಿದ ಸರಕುಗಳ ಉತ್ಪಾದನೆಯಿಂದ ೩೫೦ ಶತಕೋಟಿ ಡಾಲರ್ ಹಾಗೂ ಘಟಕಗಳಿಂದ ೧೫೦ ಶತಕೋಟಿ ಡಾಲರ್‌ಗಳನ್ನು ಒಳಗೊಂಡಿರುತ್ತದೆ. ನೀತಿ ಆಯೋಗದ ಉಪಾಧ್ಯಕ್ಷ ಸುಮನ್ ಬೇರಿ ಅವರು ದೆಹಲಿಯಲ್ಲಿ 'ಎಲೆಕ್ಟ್ರಾನಿಕ್ಸ್ ಮತ್ತು ಜಾಗತಿಕ ಮೌಲ್ಯ ಸರಪಣಿಯಲ್ಲಿ ಭಾರತೀಯ ಪಾಲ್ಗೊಳ್ಳುವಿಕೆ' ಕುರಿತ ವರದಿ ಬಿಡುಗಡೆ ಮಾಡಿದರು. ಭಾರತದ ಎಲೆಕ್ಟ್ರಾನಿಕ್ಸ್ ವಲಯವನ್ನು ವ್ಯಾಪಕವಾಗಿ ವಿಸ್ತರಿಸಲು ಉತ್ತೇಜಿಸಲಾಗುತ್ತದೆ. ಭಾರತ ಜಾಗತಿಕವಾಗಿ ಎಲೆಕ್ಟ್ರಾನಿಕ್ಸ್‌ನಲ್ಲಿ ಉತ್ಪಾದನಾ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ಸುಮನ್ ಬೇರಿ ಹೇಳಿದರು.

*********

ಹಲವಾರು ಉಪಕ್ರಮಗಳ ಮೂಲಕ ಸರ್ಕಾರಿ ತಾಂತ್ರಿಕ ಶಿಕ್ಷಣ ವಲಯವನ್ನು ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಹೊಸ ಆಲೋಚನೆಗಳು ಮತ್ತು ಚಿಂತನೆಗಳನ್ನೊಳಗೊಂಡ ವರದಿಯನ್ನು ಕೇಂದ್ರಕ್ಕೆ ಸಲ್ಲಿಸುವಂತೆ ಸರ್ಕಾರಿ ತಾಂತ್ರಿಕ ಇಂಜಿನಿಯರಿಂಗ್ ಶೈಕ್ಷಣಿಕ ಸಂಸ್ಥೆಗಳಿಗೆ ಸಚಿವರು ಸೂಚಿಸಿದ್ದಾರೆ. ಶೈಕ್ಷಣಿಕ ಸಂಸ್ಥೆಗಳ ವರದಿ ಆಧರಿಸಿ, ಶೈಕ್ಷಣಿಕ ಸೌಲಭ್ಯಗಳನ್ನು ಸುಧಾರಣೆ ಮಾಡಲು ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ. ಮುಂಬೈನಲ್ಲಿ ನಿನ್ನೆ ನಡೆದ ಸಭೆಯೊಂದರಲ್ಲಿ ಮಹಾರಾಷ್ಟ್ರದ ಉನ್ನತ ಮತ್ತು ತಂತ್ರಜ್ಞಾನ ಸಚಿವ ಚಂದ್ರಕಾಂತ್ ದಾದಾ ಪಾಟೀಲ್ ಅವರೊಂದಿಗೆ ನಡೆಸಿದ ಮಾತುಕತೆ ಸಂದರ್ಭದಲ್ಲಿ ಈ ವಿಷಯವನ್ನು ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ರೋಬೋಟಿಕ್ಸ್ ಮತ್ತು ಆಟೋಮೇಷನ್ ಹಾಗೂ ಐಐಟಿ ತ್ರಿಡಿ ಪೇಂಟಿಂಗ್ ಕುರಿತ ಪ್ರಾತ್ಯಕ್ಷಿಕೆಯನ್ನು ಪ್ರದರ್ಶಿಸಲಾಯಿತು.

*********

ಭೂತಾನ್ ಜತೆಗಿನ ಭಾರತದ ಮಿತ್ರತ್ವ ಮುಂದುವರಿಯಲಿದೆ ಮತ್ತು ಆ ದೇಶದೊಂದಿಗಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಭಾರತ ಬದ್ಧವಾಗಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಪುನರುಚ್ಚರಿಸಿದ್ದಾರೆ. ಭೂತಾನ್ ಪ್ರವಾಸದಲ್ಲಿರುವ ಮಿಸ್ರಿ, ನಿನ್ನೆ ಥಿಂಪುವಿನಲ್ಲಿ ಭೂತಾನ್ ಪ್ರಧಾನಮಂತ್ರಿ ಶೇರಿಂಗ್ ತೋಬ್ಗೆ ಅವರನ್ನು ಭೇಟಿ ಮಾಡಿ, ಈ ವಿಚಾರವನ್ನು ಸ್ಪಷ್ಟಪಡಿಸಿದ್ದಾರೆ. ಮಿಸ್ರಿ ಅವರು ಇದೇ ಸಂದರ್ಭದಲ್ಲಿ ಭೂತಾನ್‌ನ ವಿದೇಶಾಂಗ ಸಚಿವ ಡಿ.ಎನ್

ಧುಂಗೇಲ್ ಅವರನ್ನು ಭೇಟಿ ಮಾಡಿ, ದ್ವಿಪಕ್ಷೀಯ ಸಂಬಂಧವೃದ್ಧಿ ಕುರಿತು ಮಾತುಕತೆ ನಡೆಸಿದರು. ಮಿಸ್ರಿ ಎರಡು ದಿನಗಳ ಭೂತಾನ್ ಪ್ರವಾಸದಲ್ಲಿದ್ದಾರೆ.

*********

ವಿಯೆಟ್ನಾಂನ ಪ್ರಭಾವಿ ನಾಯಕ ಗುಯೆನ್ ಫು ತ್ರಾಂಗ್ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಇಂತಹ ದುಃಖದ ಸಂದರ್ಭದಲ್ಲಿ ಭಾರತದ ಜನತೆ ಮತ್ತು ನಾಯಕತ್ವ ವಿಯೆಟ್ನಾಂ ಜತೆಗೆ ದೃಢವಾಗಿ ನಿಲ್ಲಲಿದೆ ಎಂದು ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ವಿಯೆಟ್ನಾಂನ ಆಡಳಿತಾರೂಢ ಕಮ್ಯುನಿಸ್ಟ್ ಪಕ್ಷದ ಮಹಾ ಪ್ರಧಾನ ಕಾರ್ಯದರ್ಶಿಯಾಗಿದ್ದ ಗುಯೆನ್ ಫು ತ್ರಾಂಗ್ ಅವರು, ದೇಶದ ಪ್ರಮುಖ ನಾಯಕರಲ್ಲಿ ಒಬ್ಬರಾಗಿದ್ದರು. ಅವರಿಗೆ ೮೦ ವರ್ಷ ವಯಸ್ಸಾಗಿತ್ತು. ವಯೋಸಹಜ ಅನಾರೋಗ್ಯದಿಂದ ಅವರು ಸಾವನ್ನಪ್ಪಿದ್ದಾರೆ ಎಂದು ಪಕ್ಷದ ಹೇಳಿಕೆಯಲ್ಲಿ ತಿಳಿಸಲಾಗಿದೆ.

*********

ಉತ್ತರ ಪ್ರದೇಶದ ಲಖನೌದಲ್ಲಿ ನೈಸರ್ಗಿಕ ಕೃಷಿ ಆಧರಿತ "ಭಾರತೀಯ ನೈಸರ್ಗಿಕ ಕೃಷಿ ವಿಧಾನ" ಕಾರ್ಯಕ್ರಮವನ್ನು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ತಲತಲಾಂತರಗಳಿಂದ ಭಾರತದಲ್ಲಿ ರೂಢಿಯಲ್ಲಿರುವ ನೈಸರ್ಗಿಕ ಕೃಷಿ ಇಂದು ಹಲವು ಕಡೆಗಳಲ್ಲಿ ಕಣ್ಮರೆಯಾಗುತ್ತಿದೆ. ರಾಸಾಯನಿಕ ಕೃಷಿ ರಾರಾಜಿಸುತ್ತಿದ್ದು, ಇದು ಅತ್ಯಂತ ದುರ್ದೈವದ ಸಂಗತಿ ಎಂದು ಹೇಳಿದರು. ಜಮೀನುಗಳಿಗೆ ರಾಸಾಯನಿಕ ಸಿಂಪಡಣೆ ಮಾಡಿದರೆ ಮಾತ್ರ ಅಧಿಕ ಇಳುವರಿ ಬರುತ್ತದೆ ಎನ್ನುವ ಯೋಚನೆ ಸರಿಯಲ್ಲ. ರಾಸಾಯನಿಕ ಸಿಂಪಡಣೆಯಿಂದ ವಿಷಯುಕ್ತ ಆಹಾರಗಳ ಸೇವನೆಯಿಂದಲೇ ಇಂದು ಅನಾರೋಗ್ಯ ಸಮಸ್ಯೆ ತೀವ್ರವಾಗಿದೆ. ಭೂಮಿ ತಾಯಿಯ ರಕ್ಷಣೆಯಾದರೆ ಮಾತ್ರ ಜನರ ರಕ್ಷಣೆ ಎನ್ನುವುದನ್ನು ಅರಿಯಬೇಕು. ಭೂಮಿಗೆ ರಾಸಾಯನಿಕ ಸಿಂಪಡಣೆ ಮಾಡಿ ಜನರು ಇನ್ನಿಲ್ಲದ ಸಂಕಷ್ಟಗಳನ್ನು ಅನುಭವಿಸುವುದನ್ನು ದೂರ ಮಾಡಬೇಕಿದೆ ಎಂದು ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

*********

ಖೇಲೋ ಇಂಡಿಯಾ ಉದಯೋನ್ಮುಖ ಪ್ರತಿಭೆಗಳ ಗುರುತಿಸುವಿಕೆ-ಕೀರ್ತಿ ಕಾರ್ಯಕ್ರಮವನ್ನು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ದೆಹಲಿಯಲ್ಲಿ ನಿನ್ನೆ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಅತ್ಯಂತ ತಳ ಮಟ್ಟದ ಕ್ರೀಡಾ ಪ್ರತಿಭೆಗಳಿಗೂ ಅವಕಾಶ ನೀಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈಗಾಗಲೇ ಹಲವು ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಮೊದಲ ಹಂತದಲ್ಲಿ ಒಂದು ಲಕ್ಷ ಕ್ರೀಡಾ ಪ್ರತಿಭೆಗಳನ್ನು ಗುರುತಿಸಲಾಗುತ್ತಿದೆ. ಭಾರತೀಯ ಕ್ರೀಡೆಯನ್ನು ಉಜ್ವಲ ಭವಿಷ್ಯದತ್ತ ಕೊಂಡೊಯ್ಯುವ ಅರ್ಹ

ವಿದ್ಯಾರ್ಥಿಗಳನ್ನು ಗುರುತಿಸಲು ಇಂಥ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

*********

ಶ್ರೀಲಂಕಾದ ದಾಂಬೂಲದಲ್ಲಿ ನಿನ್ನೆ ನಡೆದ ಮಹಿಳೆಯರ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾರತ, ಪಾಕಿಸ್ತಾನ ವಿರುದ್ಧ ೭ ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಪಾಕಿಸ್ತಾನ ಒಡ್ಡಿದ ೧೦೯ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಭಾರತ, ೩೫ ಎಸೆತಗಳು ಇರುವಂತೆಯೇ ೭ ವಿಕೆಟ್ ಗಳ ಗುರಿ ಸಾಧಿಸಿತು. ಆರಂಭಿಕ ಆಟಗಾರ್ತಿ ಸ್ಮೃತಿ ಮಂದಣ್ಣ ೪೫ ರನ್, ಶಫಾಲಿ ವರ್ಮಾ ೪೦ ರನ್‌ಗಳನ್ನು ಗಳಿಸುವ ಮೂಲಕ ತಂಡದ ಗೆಲುವಿಗೆ ನೆರವಾದರು. ಮೊದಲು ಬ್ಯಾಟಿಂಗ್ ಆರಂಭಿಸಿದ ಪಾಕಿಸ್ತಾನ ತಂಡ, ೧೯.೨ ಓವರ್‌ಗಳಿಗೆ ೧೦೮ ರನ್ ಗಳಿಸಿತ್ತು. ದೀಪ್ತಿ ಶರ್ಮಾ, ಕೇವಲ ೨೦ ರನ್‌ಗಳಲ್ಲಿ ೩ ವಿಕೆಟ್ ಗಳಿಸಿದರು. ರೇಣುಕಾ ಸಿಂಗ್, ಪೂಜಾ ವಸ್ತ್ರಾಕರ್ ಮತ್ತು ಶ್ರೇಯಾಂಕ ಪಾಟೀಲ್ ತಲಾ ೨ ವಿಕೆಟ್ ಗಳಿಸಿದರು. ದೀಪ್ತಿ ಶರ್ಮಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ನಾಳೆ ನಡೆಯಲಿರುವ ಪಂದ್ಯದಲ್ಲಿ ಭಾರತ, ಯುಎಇ ತಂಡವನ್ನು ಎದುರಿಸಲಿದೆ.

*****END****